ರಾಜ್ಯದಲ್ಲಿ ಸಣ್ಣ ರೈತರು ಸಂಕಷ್ಟಕ್ಕೆ ಸಿಲುಕಿರುವುದರ ಬಗ್ಗೆ

1784 (1811); ಶ್ರೀ ಅಶೋಕ್ ಆರ್. (ಪದ್ಮನಾಭ ನಗರ)

ಅ) ರಾಜ್ಯದಲ್ಲಿ ಕೃಷಿ ಸಂಕಷ್ಟಕ್ಕೆ ಸಿಲುಕಿಕೊಂಡು ಆತ್ಮಹತ್ಯೆಗೆ ಶರಣಾಗಿರುವ ರೈತರ ಸಂಖ್ಯೆ ಎಷ್ಟು;

ಆ) ರಾಜ್ಯ ರೈತರಿಗೆ ಕೃಷಿ ಅಭಿವೃದ್ಧಿಗಾಗಿ ವಿಶೇಷ ಯೋಜನೆಗಳನ್ನೇನಾದರೂ ಜಾರಿಗೊಳಿಸಲಾಗುವುದೇ;

ಇ) ರಾಜ್ಯ ರೈತರಿಗೆ ಕೃಷಿ ನಷ್ಟದಿಂದ ಆತ್ಮಹತ್ಯೆ ಮಾಡಿಕೊಂಡಿರುವ ಕುಟುಂಬದವರಿಗೆ ಪರಿಹಾರ ನೀಡಲಾಗಿದೆಯೇ;

ಈ) ಯಾವ ರೀತಿಯ ಪರಿಹಾರ ನೀಡಲಾಗಿದೆ? (ವಿವರ ನೀಡುವುದು)

ಶ್ರೀ ಕೃಷ್ಣ ಭೈರೇಗೌಡ (ಕೃಷಿ ರಾಜ್ಯ ಸಚಿವರು)

ಅ) ರಾಜ್ಯದಲ್ಲಿ 2013–14 ನೇ ಸಾಲಿನಲ್ಲಿ 58 ಮತ್ತು 2014–15 ನೇ ಸಾಲಿನಲ್ಲಿ (ಡಿಸೆಂಬರ್–14 ಅಂತ್ಯದವರೆಗೆ) 40 ರೈತರು ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ಪ್ರಕರಣಗಳು ವರದಿಯಾಗಿರುತ್ತವೆ.

ಆ) ರಾಜ್ಯದ ರೈತರಿಗೆ ಕೃಷಿ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ರೂಪಿಸಲಾಗಿದೆ.

1. ರಾಜ್ಯದಲ್ಲಿನ ಶೇ. 68 ರಷ್ಟು ಮಳೆಯಾಶ್ರಿತ ಪ್ರದೇಶದಲ್ಲಿ ಐದು ಒಣ ವಲಯಗಳನ್ನು ಗಮನದಲ್ಲಿಟ್ಟುಕೊಂಡು ಕೃಷಿ ಭಾಗ್ಯ ಎಂಬ ಹೊಸ ಯೋಜನೆಯನ್ನು 2014–15 ನೇ ಸಾಲಿನಿಂದ ಅನುಷ್ಠಾನಕ್ಕೆ ತರಲಾಗಿರುತ್ತದೆ. ಮಳೆ ನೀರಿನ ಸಂರಕ್ಷಣೆಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ.
2. 2009–10 ನೇ ಸಾಲಿನಿಂದ ಭೂ–ಚೇತನ ವೆಂಬ ವೈಜ್ಞಾನಿಕ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಇದರ

ಧ್ಯೇಯೋದ್ದೇಶವೇನೆಂದರೆ ಕೃಷಿ ಉತ್ಪನ್ನವನ್ನು ಹೆಚ್ಚಿಸುವುದು ಮತ್ತು ಖುಷ್ಕಿ ಭೂಮಿಯಲ್ಲಿ ಹೆಚ್ಚಿನ ಆದಾಯ ಗಳಿಸುವುದು.

3. ರಿಯಾಯಿತಿ ದರದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಬಿತ್ತನೆ ಬೀಜ ಹಾಗೂ ಇತರೆ ಕೃಷಿ ಪರಿಕರಗಳನ್ನು ವಿತರಿಸಲಾಗುತ್ತಿದೆ.
4. ಪವರ್ ಟಿಲ್ಲರ್ ಮತ್ತು ಹೈಟೆಕ್ ಕೃಷಿ ಉಪಕರಣಗಳನ್ನು ಹನಿ ನೀರಾವರಿ, ತುಂತುರು ನೀರಾವರಿ ಘಟಕಗಳನ್ನು ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತಿದೆ.
5. ಕೃಷಿ ತಾಂತ್ರಿಕತೆಯ ಬಗ್ಗೆ ರೈತರಿಗೆ ತರಬೇತಿ ನೀಡಲಾಗುತ್ತಿದೆ.
6. ಸಾಗುವಳಿ ವೆಚ್ಚ ಕಡಿಮೆಮಾಡಲು ಸಾವಯವ ಕೃಷಿ ಬಗ್ಗೆ ಪ್ರೋತ್ಸಾಹಿಸಲಾಗುತ್ತಿದೆ.
7. ಮಣ್ಣು ಪರೀಕ್ಷೆ ಆಧಾರದ ಮೇಲೆ ಮಣ್ಣಿನ ಫಲವತ್ತತೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ.
8. 2009–10 ನೇ ಸಾಲಿನಿಂದ ಶೇ. 3 ರ ಬಡ್ಡಿದರದಲ್ಲಿ ವಾಣಿಜ್ಯ ಬ್ಯಾಂಕುಗಳು ಮತ್ತು ಪ್ರಾದೇಶಿಕ ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳಲ್ಲಿ ಕೃಷಿ ಸಾಲ ನೀಡುವ ಯೋಜನೆ ಜಾರಿಯಲ್ಲಿದೆ.
9. ಕೀಟನಾಶಕ, ಪೀಡೆ ನಾಶಕಗಳು ಹಾಗೂ ಸಿಂಪರಣಾ ಯಂತ್ರಗಳನ್ನು ರಿಯಾಯಿತಿದರದಲ್ಲಿ ಒದಗಿಸಲಾಗುತ್ತಿದೆ.
10. ಎಣ್ಣೆ ಕಾಳು, ದ್ವಿದಳ ಧಾನ್ಯ, ಹತ್ತಿ ಬೆಳೆಗಳಿಗೂ ಸಹ ರಿಯಾಯಿತಿ ದರದಲ್ಲಿ ವಿವಿಧ ಸವಲತ್ತುಗಳನ್ನು ಒದಗಿಸಲಾಗುತ್ತಿದೆ.

ಇ) ಹೌದು.

ಈ) ರೈತರ ಆತ್ಮಹತ್ಯೆ ಪ್ರಕರಣಗಳನ್ನು ಪರಿಶೀಲಿಸಿ ತೀರ್ಮಾನ ಕೈಗೊಳ್ಳಲು ಉಪವಿಭಾಗದ ಮಟ್ಟದಲ್ಲಿ ಸಂಬಂಧಿಸಿದ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಈ ಸಮಿತಿಯು, ಪ್ರತಿ ಪ್ರಕರಣಗಳ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕೃಷಿ ಸಾಲದ ಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡಿರುವುದನ್ನು ಖಾತ್ರಿಪಡಿಸಿಕೊಂಡು ಪರಿಹಾರ ನೀಡಲು ತೀರ್ಮಾನಿಸಿದ ನಂತರ ಜಿಲ್ಲಾ ಜಂಟಿ ಕೃಷಿ

ನಿರ್ದೇಶಕರು ಸಲ್ಲಿಸುವ ಪ್ರಸ್ತಾವನೆಯನ್ವಯ ಇಲಾಖಾ ವತಿಯಿಂದ ದಿನಾಂಕ: 18.07.2003 ರ ಸರ್ಕಾರದ ಆದೇಶ ಸಂಖ್ಯೆ: ಕೃತೋಇ/280/ಕೃಉಇ/2003 ರಲ್ಲಿ ಸಾಲ ಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಕ್ಕೆ ಸಹಾಯ ನೀಡುವ ಉದ್ದೇಶದಿಂದ, ಆತ್ಮಹತ್ಯೆ ಮಾಡಿಕೊಂಡ ಪ್ರತಿ ರೈತರ ಕುಟುಂಬದ ಕಾನೂನುಬದ್ಧ ವಾರಸುದಾರರಿಗೆ ₹ 1.00 ಲಕ್ಷ ಪರಿಹಾರ ನೀಡಲಾಗುತ್ತಿದೆ.

ನುಸಿಪೀಡೆ ರೋಗದಿಂದ ಹಾಳಾದ ತೆಂಗು ಬೆಳೆಗಾರರಿಗೆ ಪರಿಹಾರ ನೀಡುವುದು

1785 (1888); ಶ್ರೀ ಬಾಲಕೃಷ್ಣ ಸಿ. ಎನ್.

ಅ) ರಾಜ್ಯದಲ್ಲಿ ತೆಂಗು ಬೆಳೆಯುವ ಜಿಲ್ಲೆಗಳು ಯಾವುವು;

ಆ) ರಾಜ್ಯದಲ್ಲಿ ಪ್ರತಿ ವರ್ಷ ಎಷ್ಟು ಪ್ರಮಾಣದ ತೆಂಗನ್ನು ಬೆಳೆಯಲಾಗುತ್ತಿದೆ; ಜಿಲ್ಲಾವಾರು ವಿವರ ನೀಡುವುದು;

ಇ) ರಾಜ್ಯದಲ್ಲಿ ರೈತರು ಬೆಳೆಯುವ ತೆಂಗಿನ ಬೆಳೆಗೆ ನುಸಿಪೀಡೆ ರೋಗದಿಂದ ಬೆಳೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ನುಸಿಪೀಡೆ ರೋಗದಿಂದ ಬೆಳೆ ನಷ್ಟವಾದ ತೆಂಗು ಬೆಳೆಗಾರರಿಗೆ ಸರ್ಕಾರ ರೈತರಿಗೆ ಪರಿಹಾರ ಧನವನ್ನೇನಾದರೂ ನೀಡಿದೆಯೇ;

ಉ) ಹಾಗಿದ್ದಲ್ಲಿ, ಇದುವರೆವಿಗೂ ಪ್ರತಿ ಎಕರೆಗೆ, ಎಷ್ಟು ರೈತರಿಗೆ ಮತ್ತು ಎಷ್ಟು ಪ್ರಮಾಣದ ಪರಿಹಾರ ಧನವನ್ನು ನೀಡಲಾಗಿದೆ? ಜಿಲ್ಲಾವಾರು ವಿವರಗಳನ್ನು ನೀಡುವುದು?